# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೧<br>Part – I | ಬೆಂಗಳೂರು, ಗುರುವಾರ ೨೭, ನವೆಂಬರ್, ೨೦೨೫ ( ಮಾರ್ಗಶಿರಾ , ೦೬, ಶಕವರ್ಷ, ೧೯೪೭)<br>BENGALURU, THURSDAY 27, NOVEMBER, 2025 (MARGASHIRA , 06, SHAKAVARSHA, 1947) | ನಂ. ೭೬೦<br>No. 760 |
|---|---|---|


## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ ಎಲ್ಲಾ ಪಿಕಾರ್ಡ್ ಬ್ಯಾಂಕುಗಳಿಗೆ ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿ., ಈ ಸಂಸ್ಥೆಯ ಆಡಳಿತ ಮಂಡಳಿಯ ಚುನಾವಣೆ ಪ್ರಕ್ರಿಯೆಗಳಲ್ಲಿ ಭಾಗವಹಿಸಲು ಅನುಮತಿ ನೀಡಿ ಹೊರಡಿಸಿರುವ ಆದೇಶವನ್ನು ಹಿಂಪಡೆಯುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಸಿಒ 118 ಸಿಎಲ್ಎಮ್ 2025, ದಿನಾಂಕ: 20-11-2025
2. ಅಧ್ಯಕ್ಷರು, ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿ., ಇವರು ಸರ್ಕಾರಕ್ಕೆ ಬರೆದಿರುವ ದಿನಾಂಕ: 21-11-2025 ರ ಪತ್ರ.

***********

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರ.ಸಂ. (1) ಸರ್ಕಾರದ ಆದೇಶದಲ್ಲಿ, ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕಿನ ಆಡಳಿತ ಮಂಡಳಿಯ ಚುನಾವಣೆಯು ದಿನಾಂಕ: 17-12-2025ರಂದು ನಡೆಯಲಿದ್ದು, ಚುನಾವಣಾಧಿಕಾರಿಗಳು ಬಿಡುಗಡೆ ಮಾಡಿರುವ ಮತದಾರರ ಪಟ್ಟಿಯಲ್ಲಿ 183 ಪಿಕಾರ್ಡ್ ಬ್ಯಾಂಕುಗಳ ಪೈಕಿ 60 ಪಿಕಾರ್ಡ್ ಬ್ಯಾಂಕುಗಳು ಮಾತ್ರ ಚುನಾವಣೆಯಲ್ಲಿ ಭಾಗವಹಿಸಲು ಅರ್ಹತೆ ಹೊಂದಿದ್ದು, 123 ಪಿಕಾರ್ಡ್ ಬ್ಯಾಂಕುಗಳು ಅನರ್ಹಗೊಂಡಿರುತ್ತವೆಂದು ತಿಳಿಸಿದ್ದು, ಸಂಬಂಧಪಟ್ಟ ಜಿಲ್ಲೆಗಳಲ್ಲಿ ಪ್ರಜಾಸತ್ತಾತ್ಮಕವಾಗಿ ಪ್ರಾತಿನಿಧ್ಯ ನೀಡಲು ಅವಕಾಶ ಇಲ್ಲದಂತಾಗಿರುತ್ತದೆ. ಆದ್ದರಿಂದ, ಸಮಗ್ರವಾಗಿ ಪಿಕಾರ್ಡ್ ಬ್ಯಾಂಕುಗಳು ಚುನಾವಣೆಯಲ್ಲಿ ಪಾಲ್ಗೊಳ್ಳಲು ಸಾಧ್ಯವಾಗದಿರುವ ಹಿನ್ನಲೆಯಲ್ಲಿ, ಸಹಕಾರ ಸಂಘಗಳ ಕಾಯ್ದೆ 1959 ಪ್ರಕರಣ 121ರಲ್ಲಿ ಸರ್ಕಾರಕ್ಕೆ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ರಾಜ್ಯ ಸಹಕಾರ ಸಂಘಗಳ ಕಾಯ್ದೆ 1959ರ ಸೆಕ್ಷನ್ 20(2)(ಬಿ)(iv)ಕ್ಕೆ ವಿನಾಯಿತಿ ನೀಡಿ, ರಾಜ್ಯದಲ್ಲಿರುವ ಎಲ್ಲಾ ಪಿಕಾರ್ಡ್ ಬ್ಯಾಂಕುಗಳು ಚುನಾವಣೆಯಲ್ಲಿ ಸ್ಪರ್ಧಿಸಲು ಹಾಗೂ ಮತ ಚಲಾಯಿಸಲು ಅನುಮತಿ ನೀಡಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರ.ಸಂ. (2) ರಲ್ಲಿ, ಅಧ್ಯಕ್ಷರು, ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿ., ಇವರು ಸರ್ಕಾರಕ್ಕೆ ಬರೆದಿರುವ ದಿನಾಂಕ:21-11-2025ರ ಪತ್ರದಲ್ಲಿ, ರಾಜ್ಯ ಸರ್ಕಾರವು ಕಸ್ಕಾರ್ಡ್ ಬ್ಯಾಂಕು, ಪಿಕಾರ್ಡ್ ಬ್ಯಾಂಕುಗಳ ಮೂಲಕ ರಾಜ್ಯದ ರೈತರಿಗೆ ವಿತರಿಸುವಂತಹ ದೀರ್ಘಾವಧಿ ಕೃಷಿ ಮತ್ತು ಕೃಷಿ ಪೂರಕ ಸಾಲಗಳ ಬಡ್ಡಿದರ ನಿಗದಿಪಡಿಸುವ ಸಂದರ್ಭದಲ್ಲಿ ಮತ್ತು ಪ್ರತಿವರ್ಷ ಸರ್ಕಾರಿ ಖಾತರಿಯನ್ನು ವಿಸ್ತರಿಸುವ ಸಂದರ್ಭದಲ್ಲಿ ವಸೂಲಾತಿ ಪ್ರಮಾಣವನ್ನು ಶೇ.80 ರಿಂದ 90 ರವರೆಗೆ ಸಾಧಿಸುವಂತೆ ಷರತ್ತು ವಿಧಿಸಿರುವುದರಿಂದ ಇದಲ್ಲದೇ ತ್ರೈಮಾಸಿಕವಾಗಿ ನಡೆಯುವಂತಹ High level committee meeting, ರಾಜ್ಯ ಮಟ್ಟದ ಪ್ರಗತಿ ಪರಿಶೀಲನಾ ಸಭೆ ಮತ್ತು ನಬಾರ್ಡ್ ಸಂಸ್ಥೆಯು ಕೈಗೊಳ್ಳುವಂತಹ ತಪಾಸಣೆಯಲ್ಲಿಯೂ ಸಹ ಪಿಕಾರ್ಡ್ ಬ್ಯಾಂಕುಗಳ ಕಳಪೆ ವಸೂಲಾತಿ ಪ್ರಮಾಣದ ಬಗ್ಗೆ ತೀವ್ರವಾಗಿ ಆಕ್ಷೇಪಿಸಿರುತ್ತಾರೆ. NABCON ಕೈಗೊಂಡಿರುವ ಅಧ್ಯಯನದಲ್ಲಿ ಲಾಭದಾಯಕವಲ್ಲದ ಪಿಕಾರ್ಡ್ ಬ್ಯಾಂಕುಗಳನ್ನು ಸಮಾಪನೆಗೊಳಿಸುವಂತೆ ಮತ್ತು ಈ ಪಿಕಾರ್ಡ್ ಬ್ಯಾಂಕುಗಳಿಂದಾಗಿ ನಷ್ಟದೆಡೆಗೆ ಸಾಗುತ್ತಿರುವ ಕಸ್ಕಾರ್ಡ್ ಬ್ಯಾಂಕನ್ನು ಅಪೆಕ್ಸ್ ಬ್ಯಾಂಕ್‌ನೊಂದಿಗೆ ವಿಲೀನಗೊಳಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ. ಆದ್ದರಿಂದ ಆರ್ಥಿಕ ಶಿಸ್ತು ಇಲ್ಲದಂತಹ ಪಿಕಾರ್ಡ್ ಬ್ಯಾಂಕುಗಳ ಕೋರಿಕೆಗಳನ್ನು ಪರಿಗಣಿಸದೇ, ಸಹಕಾರ ಕಾಯ್ದೆಗೆ ಧಕ್ಕೆಯಾಗದಂತೆ ಸಹಕಾರ ಸಂಸ್ಥೆಗಳನ್ನು ಉಳಿಸುವ ನಿಟ್ಟಿನಲ್ಲಿ ಸೂಕ್ತ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ಮುಂದುವರೆದು ಸನ್ಮಾನ್ಯ ಮುಖ್ಯಮಂತ್ರಿಗಳ ಗೃಹ ಕಛೇರಿಯಲ್ಲಿ ದಿನಾಂಕ:25-11-2025 ರಂದು ನಡೆದ ಸಭೆಯಲ್ಲಿ ತೀರ್ಮಾನಿಸಿದಂತೆ 183 ಪಿಕಾರ್ಡ್ ಬ್ಯಾಂಕುಗಳ ಪೈಕಿ 60 ಪಿಕಾರ್ಡ್ ಬ್ಯಾಂಕುಗಳು ಮಾತ್ರ ಚುನಾವಣೆಯಲ್ಲಿ ಭಾಗವಹಿಸಲು ಅರ್ಹತೆ ಹೊಂದಿದ್ದು, 123 ಪಿಕಾರ್ಡ್ ಬ್ಯಾಂಕುಗಳು ಅನರ್ಹಗೊಂಡಿರುವುದನ್ನು ಮನಗಂಡು ಈ ಸಂಘಗಳಿಗೂ ಕೂಡ ಅರ್ಹತೆಯನ್ನು ಪಡೆಯಲು ಅನುವಾಗುವಂತೆ ಇನ್ನೂ ಹೆಚ್ಚಿನ ಸಮಯಾವಕಾಶವನ್ನು ನೀಡಲು ನಿರ್ಧರಿಸಿದ್ದು ಅದರಂತೆ ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿ., ಬೆಂಗಳೂರು ಈ ಸಂಸ್ಥೆಗೆ 2025-30 ರ ಅವಧಿಗೆ ಸಂಬಂಧಿಸಿದಂತೆ ದಿನಾಂಕ:17-12-2025 ರಂದು ಜರುಗಲಿರುವ ಆಡಳಿತ ಮಂಡಳಿಯ ಚುನಾವಣೆಯನ್ನು ಮುಂದಿನ ಆರು ತಿಂಗಳುಗಳ ಕಾಲ ಮುಂದೂಡಲು ನಿರ್ಧರಿಸಿದ್ದು, ಈ ಸಂಬಂಧ ಪ್ರತ್ಯೇಕ ಆದೇಶವನ್ನು ಹೊರಡಿಸಲು ಕ್ರಮವಹಿಸಲಾಗಿರುವುದರಿಂದ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರ ಪ್ರಕರಣ 121ರಲ್ಲಿ ಸರ್ಕಾರಕ್ಕೆ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ರಾಜ್ಯ ಸಹಕಾರ ಸಂಘಗಳ ಕಾಯ್ದೆ 1959ರ ಸೆಕ್ಷನ್ 20(2)(ಬಿ)(iv)ಕ್ಕೆ ವಿನಾಯಿತಿ ನೀಡಿ, ದಿನಾಂಕ:20-11-2025ರಂದು ಹೊರಡಿಸಿದ್ದ ಆದೇಶವನ್ನು ಹಿಂಪಡೆಯಲು ನಿರ್ಧರಿಸಲಾಗಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಸಿಒ 118 ಸಿಎಲ್ಎಮ್ 2025, ಬೆಂಗಳೂರು,</u>**

**<u>ದಿನಾಂಕ: 27-11-2025.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 121ರಲ್ಲಿ ಸರ್ಕಾರಕ್ಕೆ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿ., ಬೆಂಗಳೂರು ಈ ಸಂಸ್ಥೆಗೆ 2025-30ರ ಅವಧಿಗೆ ನಡೆಯುವ ಆಡಳಿತ ಮಂಡಳಿಯ ಚುನಾವಣೆಯಲ್ಲಿ ರಾಜ್ಯದಲ್ಲಿರುವ ಎಲ್ಲಾ ಪಿಕಾರ್ಡ್ ಬ್ಯಾಂಕುಗಳು ಸ್ಪರ್ಧಿಸಲು ಹಾಗೂ ಮತ ಚಲಾಯಿಸಲು ಅನುವಾಗುವಂತೆ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರ ಸೆಕ್ಷನ್ 20(2)(ಬಿ)(iv)(ಎ) ಮತ್ತು (ಬಿ)ಗಳಿಗೆ ವಿನಾಯಿತಿ ನೀಡಿ ಹೊರಡಿಸಿರುವ ಆದೇಶ ಸಂಖ್ಯೆ: ಸಿಒ 118 ಸಿಎಲ್ಎಮ್ 2025 ದಿನಾಂಕ:20-11-2025ರ ಆದೇಶವನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆದು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(**ರಂಗನಾಥ ಜಿ.**)
ಸರ್ಕಾರದ ಅಧೀನ ಕಾರ್ಯದರ್ಶಿ-3
ಸಹಕಾರ ಇಲಾಖೆ

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH